**ದಿನಾಂಕ: 04.06.2022 ರಂದು ಬೆಳಿಗ್ಗೆ 10.30 ಕ್ಕೆ ಶ್ರೀಮತಿ ಅನುಷಾ .ಎ.ಎಂ., ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಟ್ರಾಫಿಕ್ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಮೇಜರ್ ರೋಡ್ ಇಲಾಖೆ ಅಧಿಕಾರಿಗಳು |

## :ನಡಾವಳಿಯ ವರದಿ:

➢ ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ➢ 3ನೇ ಮುಖ್ಯರಸ್ತೆ, ಡಾಲರ್ಸ್ ಕಾಲೋನಿ 4ನೇ ಹಂತದ ರಸ್ತೆಯ ಪಕ್ಕದಲ್ಲಿ ಅನಧಿಕೃತವಾಗಿ ವಾಹನಗಳನ್ನು ನಿಲುಗಡೆ ಮಾಡುತ್ತಿದ್ದು, ಸದರಿ ವಾಹನಗಳನ್ನು ನಿಲುಗಡೆಯನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. **ಕ್ರಮ : ಜಯನಗರ ಸಂಚಾರಿ ಪೊಲೀಸ್ ಠಾಣೆ, ಜಯನಗರ**
- ➢ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಟೆಲಿಫೋನ್ ಕಂಬದ ಹತ್ತಿರ ಘನತ್ಯಾಜ್ಯ ಶೇಖರಣೆಯಾಗುತ್ತಿದ್ದು, ಅದನ್ನು ಕೂಡಲೇ ತೆರವುಗೊಳಿಸುವಂತೆ ಚರ್ಚಿಸಲಾಯಿತು. **ಕ್ರಮ : ಸ.ಕಾ.ನಿ.ಅ. (ಘನತ್ಯಾಜ್ಯ ನಿರ್ವಹಣಾ), ಜಯನಗರ ವಿಭಾಗ**
- ➢ 17ನೇ ಮತ್ತು 18ನೇ ಮುಖ್ಯರಸ್ತೆಯಲ್ಲಿ ಹಾದುಹೋಗಿರುವ ಹೈ-ಟೆನ್ಷನ್ ವೈರ್‌ನ ಕೆಳಭಾಗದಲ್ಲಿ ಹುಲ್ಲು, ಗಿಡಗಳು ಬೆಳೆದಿದ್ದು, ಅದನ್ನು ತೆರವುಗೊಳಿಸುವಂತೆ ಕೋರಲಾಯಿತು. ಕ್ರಮ:- **ಸ.ಕಾ.ನಿ.ಅ. (ಘನತ್ಯಾಜ್ಯ ನಿರ್ವಹಣಾ), ಜಯನಗರ ವಿಭಾಗ**

**ಪು.ತಿ.ನೋ**

- 8ನೇ ಅಡ್ಡರಸ್ತೆ, ಜೆ.ಪಿ.ನಗರ 2ನೇ ಹಂತದಲ್ಲಿರುವ ಬೂಮ್ಸ್ ಬಾರ್‌ನ ಲೈಸನ್ಸ್‌ಅನ್ನು ಪರಿಶೀಲಿಸಲು ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ:- ಆರೋಗ್ಯ ಇಲಾಖೆ, ಜಯನಗರ ವಿಭಾಗ**

- ವಾರ್ಡ್ ವ್ಯಾಪ್ತಿಯಲ್ಲಿನ ಓವರ್ ಹ್ಯಾಂಗಿಂಗ್ ಕೇಬಲ್‌ಗಳು ಹಲವು ಕಡೆ ನೇತಾಡುತ್ತಿದ್ದು, ಇದರಿಂದಾಗಿ ವಾಹನ ಸಂಚಾರಕ್ಕೆ ಹಾಗೂ ಪಾದಚಾರಿಗಳಿಗೆ ತೊಂದರೆಯಾಗುತ್ತಿರುವುದಾಗಿ ಕೂಡಲೇ ತೆರವುಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. **ಕ್ರಮ :- ಸ.ಕಾ.ನಿ.ಅ.ಜೆಪಿನಗರ ಉಪವಿಭಾಗ**

- ವಾರ್ಡ್ ವ್ಯಾಪ್ತಿಯಲ್ಲಿ ಕಳ್ಳತನ, ತಂಬಾಕು ಸೇವನೆ ಹೆಚ್ಚಾಗುತ್ತಿದ್ದು ಇದನ್ನು ತಡೆಗಟ್ಟುವಂತೆ ಸಭೆಯಲ್ಲಿ ಚರ್ಚಿಸಲಾಯಿತು. **ಕ್ರಮ:- ಪೊಲೀಸ್ ಇನ್ಸ್‌ಪೆಕ್ಟರ್, ಜೆ.ಪಿ.ನಗರ**

- ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್ (ಘನತ್ಯಾಜ್ಯ) ಗಳನ್ನು ತೆರವುಗೊಳಿಸಲು ಘನತ್ಯಾಜ್ಯ ನಿರ್ವಹಣಾ ವಿಭಾಗರವರಿಗೆ ತಿಳಿಸಲಾಯಿತು. **ಕ್ರಮ :- ಸ.ಕಾ.ನಿ.ಅ. (ಘನತ್ಯಾಜ್ಯ ನಿರ್ವಹಣ), ಜಯನಗರ ವಿಭಾಗ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.
- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.